## ಹಿಂಬರಹ

ಸಂಖ್ಯೆ: ಡಿಟಿಇ 01 ಇಎಸ್‌ಟಿ(9) 2017/2599 ದಿನಾಂಕ: 28-12-2017

ಕರ್ನಾಟಕ ಸರ್ಕಾರದ ನಡವಳಿಗಳು: ಸರ್ಕಾರಿ ಆದೇಶದ ಪತ್ರ ಸಂಖ್ಯೆ: ಆಇ 8 ಮಕಮು 2017 ಬೆಂಗಳೂರು ದಿನಾಂಕ: 16ನೇ ಡಿಸೆಂಬರ್ 2017ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ಬಿಯುಡಿ ವಿಭಾಗಕ್ಕೆ ಮಾಹಿತಿಗಾಗಿ
5. ಈ ನಿರ್ದೇಶನಾಲಯದ ಇ.ಎಸ್.ಟಿ.(1) ರಿಂದ (10) ವಿಭಾಗಕ್ಕೆ ಮಾಹಿತಿಗಾಗಿ
6. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯ ಸಿವಿಲ್ ಸೇವೆಯ ಅಧಿಕಾರಿ ಮತ್ತು ನೌಕರರುಗಳ ಗೃಹ ನಿರ್ಮಾಣ ಮುಂಗಡ ಮೊತ್ತವನ್ನು ಹೆಚ್ಚಿಸುವ ಬಗ್ಗೆ.

ಓದಲಾಗಿದೆ: 1.ಸರ್ಕಾರಿ ಆದೇಶ ಸಂಖ್ಯೆ: ಆಇ 2 ಮಕಮು 2012, ದಿ:03.11.2012
2.ಸರ್ಕಾರಿ ಆದೇಶ ಸಂಖ್ಯೆ: ಆಇ 2 ಮಕಮು 2012, ದಿ:20.01.2014.
3.ಭಾರತೀಯ ಆಡಳಿತ ಸೇವಾ ಅಧಿಕಾರಿಗಳ ಸಂಘ, ಕರ್ನಾಟಕ, ಬೆಂಗಳೂರು, ಇವರ ಪತ್ರ ಸಂಖ್ಯೆ: ಐಎಎಸ್/ಓಎ/45/2017, ದಿ:02.08.2017

**ಪ್ರಸ್ತಾವನೆ:**

ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ:03.11.2012 ಸರ್ಕಾರಿ ಆದೇಶದಲ್ಲಿ ಅಖಿಲ ಭಾರತ ಸೇವೆಗಳಿಗೆ ಸೇರಿದ ಅಧಿಕಾರಿಗಳಿಗೆ ಗೃಹ ನಿರ್ಮಾಣ/ಗೃಹ ಖರೀದಿಗಾಗಿ ಗರಿಷ್ಠ ರೂ.25.00 ಲಕ್ಷಗಳ ಮಿತಿ ಒಳಪಟ್ಟಂತೆ ಅವರ 70 ತಿಂಗಳ ವೇತನವನ್ನು ಮುಂಗಡವಾಗಿ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿತ್ತು. ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ:20.01.2014 ರ ಸರ್ಕಾರಿ ಆದೇಶದಲ್ಲಿ ರಾಜ್ಯ ಸಿವಿಲ್ ಸೇವೆಯ 'ಎ' ಗುಂಪಿನ ಅಧಿಕಾರಿಗಳಿಗೆ ಅವರು ಪಡೆಯುತ್ತಿರುವ 70 ತಿಂಗಳ ವೇತನಕ್ಕನುಗುಣವಾಗಿ ಹಾಗೂ ಮರುಪಾವತಿ ಸಾಮರ್ಥ್ಯದ ಅನುಸಾರ ಗೃಹ ನಿರ್ಮಾಣ /ಖರೀದಿ ಮುಂಗಡ ಮಿತಿಯನ್ನು ರೂ.25.00 ಲಕ್ಷಗಳಿಗೆ ಮತ್ತು ರಾಜ್ಯ ಸಿವಿಲ್ ಸೇವೆಯ ಇತರೆ ಅಧಿಕಾರಿ ಮತ್ತು ನೌಕರರುಗಳಿಗೆ ಗೃಹ ನಿರ್ಮಾಣ ಮತ್ತು ಖರೀದಿ ಮುಂಗಡ ಮಿತಿಯನ್ನು ರೂ.15.00 ಲಕ್ಷಗಳಿಗೆ ಹೆಚ್ಚಿಸಲು ಆದೇಶಿಸಲಾಗಿತ್ತು. ಸದರಿ ಆದೇಶದಲ್ಲಿ ಕರ್ನಾಟಕ ವೃಂದಕ್ಕೆ ಸೇರಿದ ಮತ್ತು ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಖಿಲ ಭಾರತ ಸೇವೆ ಅಧಿಕಾರಿಗಳಿಗೆ ಅವರ 70 ತಿಂಗಳ ಮೂಲ ವೇತನ ಮತ್ತು ವೇತನ ಶ್ರೇಣಿಯ ಗ್ರೇಡ್ ವೇತನವು ಸೇರಿದಂತೆ ಅವರ ಮರುಪಾವತಿ ಸಾಮರ್ಥ್ಯದ ಅನುಗುಣವಾಗಿ ರಾಜ್ಯ ಸಿವಿಲ್ ಸೇವೆಯ 'ಎ' ಗುಂಪಿನ ಅಧಿಕಾರಿಗಳಿಗೆ ಪರಿಷ್ಕರಿಸಲಾಗಿರುವ ರೂ.25.00 ಲಕ್ಷಗಳ ಗರಿಷ್ಠ ಗೃಹ ನಿರ್ಮಾಣ / ಖರೀದಿ ಮುಂಗಡದ ಸೌಲಭ್ಯವನ್ನು ವಿಸ್ತರಿಸಲಾಗಿತ್ತು.

ಕ್ರಮ ಸಂಖ್ಯೆ (3)ರಲ್ಲಿ ಓದಲಾದ ಪತ್ರದಲ್ಲಿ ಭಾರತೀಯ ಆಡಳಿತ ಸೇವಾ ಅಧಿಕಾರಿಗಳ ಸಂಘ, ಕರ್ನಾಟಕ, ಬೆಂಗಳೂರು ಇವರು ರಾಜ್ಯದಲ್ಲಿ ನಿವೇಶನ ಮತ್ತು ಮನೆ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದ ಸಾಮಾಗ್ರಿಗಳು ಹಾಗೂ ಕೂಲಿ ವೆಚ್ಚ ಹಲವು ಪಟ್ಟು ಹೆಚ್ಚಾಗಿದ್ದು, ನೆರೆಯ ರಾಜ್ಯ ಸರ್ಕಾರಗಳು ಅಲ್ಲಿ ಸೇವೆ ಸಲ್ಲಿಸುತ್ತಿರುವ ಅಖಿಲ ಭಾರತೀಯ ಸೇವೆಗಳ ಅಧಿಕಾರಿಗಳಿಗೆ ಮನೆ ಕಟ್ಟಲು ನೀಡುವ ಮುಂಗಡ ಮೊತ್ತವನ್ನು ರೂ.25.00 ಲಕ್ಷಗಳಿಂದ ರೂ.40.00 ಲಕ್ಷಕ್ಕೆ ಏರಿಸಿರುವಂತೆ, ಪ್ರಸ್ತುತ ರಾಜ್ಯ ಸರ್ಕಾರವು ನೀಡುತ್ತಿರುವ ಗೃಹ ನಿರ್ಮಾಣ ಗರಿಷ್ಠ ಮಿತಿಯನ್ನು ರೂ.40.00 ಲಕ್ಷಕ್ಕೆ ಹೆಚ್ಚಿಸಲು ಮನವಿ ಮಾಡಿರುತ್ತಾರೆ. ಇದನ್ನು ಕೂಲಂಕಷವಾಗಿ ಪರಿಶೀಲಿಸಿ, ಪ್ರಸ್ತುತ ಗೃಹ ನಿರ್ಮಾಣ ಸಾಮಾಗ್ರಿಗಳು ಮತ್ತು ನಿರ್ಮಾಣ ವೆಚ್ಚಗಳು ಹೆಚ್ಚಾಗಿರುವುದರಿಂದ ಮತ್ತು ಸರ್ಕಾರದ ಅಧಿಕಾರಿಗಳು/ ನೌಕರರು ಸ್ವಂತ ಮನೆ ಹೊಂದುವುದರಿಂದ ಸರ್ಕಾರದ ವಸತಿ ನಿಲಯಗಳಿಗೂ ಬೇಡಿಕೆ ಬಹುತೇಕ ಕಡಿಮೆಯಾಗುವ ಅಂಶವನ್ನು ಪರಿಗಣಿಸಿ ಪ್ರಸ್ತುತ ಕರ್ನಾಟಕ ವೃಂದಕ್ಕೆ ಸೇರಿದ ಅಖಿಲ ಭಾರತೀಯ ಸೇವಾ ಅಧಿಕಾರಿಗಳು, ರಾಜ್ಯ ಸಿವಿಲ್ ಸೇವೆಯ 'ಎ' ಗುಂಪಿನ ಅಧಿಕಾರಿಗಳು ಮತ್ತು ರಾಜ್ಯ ಸಿವಿಲ್ ಸೇವೆಯ ಇತರೆ ಅಧಿಕಾರಿಗಳು ಮತ್ತು ನೌಕರರುಗಳಿಗೆ ಗೃಹ ನಿರ್ಮಾಣ ಮತ್ತು ಖರೀದಿ ಮುಂಗಡ ಮಿತಿಯನ್ನು ಹೆಚ್ಚಿಸುವುದು ಸೂಕ್ತವೆಂದು

2. .

ನಿರ್ಣಯಿಸಲಾಗಿದೆ. ಅಖಿಲ ಭಾರತ ಸೇವೆಗಳಿಗೆ ಸೇರಿದ ಅಧಿಕಾರಿಗಳು, ರಾಜ್ಯ ಸಿವಿಲ್ ಸೇವೆಯ 'ಎ' ಗುಂಪಿನ ಅಧಿಕಾರಿಗಳಂತೆ ಗರಿಷ್ಠ ರೂ.40.00 ಲಕ್ಷಗಳು ಹಾಗೂ ರಾಜ್ಯ ಸಿವಿಲ್ ಸೇವೆಯ ಇತರೆ ಅಧಿಕಾರಿಗಳು ಮತ್ತು ನೌಕರರಿಗೆ ಗರಿಷ್ಠ ರೂ.25.00 ಲಕ್ಷಗಳ ಗೃಹ ನಿರ್ಮಾಣ/ ಖರೀದಿ ಮುಂಗಡ ಮಿತಿಯನ್ನು ಪರಿಷ್ಕರಿಸಲು ನಿರ್ಣಯಿಸಿ ಸರ್ಕಾರವು ಈ ಮುಂದಿನಂತೆ ಆದೇಶಿಸಿದೆ.

***ಸರ್ಕಾರಿ ಆದೇಶ ಸಂಖ್ಯೆ: ಆಇ 8 ಮಕಮು 2017 ಬೆಂಗಳೂರು, ದಿನಾಂಕ: 16ನೇ ಡಿಸೆಂಬರ್ 2017***

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ರಾಜ್ಯ ಸಿವಿಲ್ ಸೇವೆಯ 'ಎ' ಗುಂಪಿನ ಅಧಿಕಾರಿಗಳಿಗೆ ಅವರು ಪಡೆಯುತ್ತಿರುವ 70 ತಿಂಗಳ ವೇತನಕ್ಕೆ ಅನುಗುಣವಾಗಿ ಹಾಗೂ ಮರುಪಾವತಿ ಸಾಮಾರ್ಥ್ಯದಾನುಸಾರ ಗೃಹ ನಿರ್ಮಾಣ /ಖರೀದಿ ಮುಂಗಡದ ಗರಿಷ್ಠ ಮಿತಿಯನ್ನು ರೂ.25.00 ಲಕ್ಷಗಳಿಂದ ರೂ.40.00 ಲಕ್ಷಗಳಿಗೆ ಮತ್ತು ರಾಜ್ಯ ಸಿವಿಲ್ ಸೇವೆಯ ಇತರೆ ಅಧಿಕಾರಿಗಳು ಮತ್ತು ನೌಕರರುಗಳಿಗೆ ರೂ.15.00 ಲಕ್ಷಗಳಿಂದ ರೂ.25.00 ಲಕ್ಷಕ್ಕೆ ಹೆಚ್ಚಿಸಲು ಆದೇಶಿಸಲಾಗಿದೆ.

ಕರ್ನಾಟಕ ವೃಂದಕ್ಕೆ ಸೇರಿದ ಮತ್ತು ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಖಿಲ ಭಾರತ ಸೇವೆ ಅಧಿಕಾರಿಗಳಿಗೆ ಅವರ 70 ತಿಂಗಳ ಮೂಲ ವೇತನ ಮತ್ತು ವೇತನ ಶ್ರೇಣಿಯ ಗ್ರೇಡ್ ವೇತನವು ಸೇರಿದಂತೆ ಅವರ ಮರುಪಾವತಿ ಸಾಮರ್ಥ್ಯದ ಅನುಗುಣವಾಗಿ ರಾಜ್ಯ ಸಿವಿಲ್ ಸೇವೆಯ 'ಎ' ಗುಂಪಿನ ಅಧಿಕಾರಿಗಳಿಗೆ ಪರಿಷ್ಕರಿಸಲಾಗಿರುವ ರೂ.40.00 ಲಕ್ಷಗಳ ಗರಿಷ್ಠ ಗೃಹ ನಿರ್ಮಾಣ/ ಖರೀದಿ ಮುಂಗಡದ ಸೌಲಭ್ಯವನ್ನು ವಿಸ್ತರಿಸಲಾಗಿದೆ.

ಮೇಲೆ ಓದಲಾಗಿರುವ ಕ್ರಮ ಸಂಖ್ಯೆ(1)ರ ದಿನಾಂಕ: 03.11.2012ರ ಹಾಗೂ ಕ್ರಮ ಸಂಖ್ಯೆ(2)ರ ದಿನಾಂಕ:20.01.2014ರ ಸರ್ಕಾರಿ ಆದೇಶಗಳಲ್ಲಿ ಗೃಹ ನಿರ್ಮಾಣ/ ಖರೀದಿ ಮುಂಗಡದ ಮಂಜೂರಾತಿಗೆ ನಿರ್ಧಿಷ್ಟಪಡಿಸಿರುವ ಷರತ್ತು ಮತ್ತು ನಿಬಂಧನೆಗಳು ಯಥಾವತ್ತಾಗಿ ಮುಂದುವರಿಯುತ್ತವೆ. ಬಡ್ಡಿ ದರದ ನಿಗಧಿಪಡಿಸುವ ಬಗ್ಗೆ ಹಾಗೂ ಕರ್ನಾಟಕ ಆರ್ಥಿಕ ಸಂಹಿತೆಗೆ ಸೂಕ್ತ ತಿದ್ದುಪಡಿಯನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು.

ರಾಜ್ಯ ಸಿವಿಲ್ ಸೇವೆಯ ಅಧಿಕಾರಿಗಳು/ ನೌಕರರುಗಳಿಗೆ ಹಾಗೂ ಅಖಿಲ ಭಾರತೀಯ ಸೇವಾ ಅಧಿಕಾರಿಗಳಿಗೆ ಸಂಬಂಧಿಸಿದಂತೆ, ಗೃಹ ನಿರ್ಮಾಣ/ ಖರೀದಿ ಮುಂಗಡವನ್ನು ರಾಜ್ಯದ ಆಯವ್ಯಯದಿಂದ ಬಿಡುಗಡೆ ಮಾಡುವ ಪದ್ಧತಿಯು ಮುಂದುವರೆಯುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ,

(ಜಿ.ಶಶಿಧರ್)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಆಡಳಿತ ಮತ್ತು ಮುಂಗಡಗಳು)

ಗೆ:

1. ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ತನಿಖೆ), ಕರ್ನಾಟಕ, ಬೆಂಗಳೂರು,
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು,

3. ಎಲ್ಲಾ ಇಲಾಖಾ ಮುಖ್ಯಸ್ಥರುಗಳು,
4. ಎಲ್ಲಾ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತಿಯ / ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು,
5. ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು,
6. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು,
7. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಕಂದಾಯ ಭವನ ಬೆಂಗಳೂರು,
8. ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು,
9. ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು,
10. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು,
11. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ – ಸಚಿವ ಸಂಪುಟ ಸಭೆ ದಿನಾಂಕ:11.12.2017ರ ಸಭೆಯ ಕಾರ್ಯಸೂಚಿ ಕ್ರಸಂ: 41 (ಸಿ–816/2017) ರಲ್ಲಿನ ನಿರ್ಣಯದಂತೆ.
12. ಸರ್ಕಾರದ ಅಧೀನ ಕಾರ್ಯದರ್ಶಿಗಳು (ಎಫ್ಆರ್ ಮತ್ತು ಬಿಸಿಸಿ), ಆರ್ಥಿಕ ಇಲಾಖೆ– ಕರ್ನಾಟಕ ಆರ್ಥಿಕ ಸಂಹಿತೆಗೆ ಸೂಕ್ತ ತಿದ್ದುಪಡಿ ಹೊರಡಿಸಲು ಕ್ರಮ ಕೈಗೊಳ್ಳಲು,
13. ಸರ್ಕಾರದ ಉಪ ಕಾರ್ಯದರ್ಶಿಗಳು(ಸೇವೆಗಳು–2), ಆರ್ಥಿಕ ಇಲಾಖೆ,
14. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು,
15. ಆರ್ಥಿಕ ಇಲಾಖೆಯ ಗಣಕ ಕೋಶ–ಆರ್ಥಿಕ ಇಲಾಖೆಯ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲು,
16. ಕಛೇರಿ ಪ್ರತಿ/ಶಾಖಾರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.